KATK910009402021

# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ, ತಿಪಟೂರು.

## ಸಿ.ಸಿ.ನಂ. 644/2021

ಪಿರ್ಯಾದುದಾರರು: ಧ್ರಾಕ್ಷಾಯಣಮ್ಮ,

ವಿರುದ್ಧ

ಆರೋಪಿ : ಕಾಂತರಾಜು ಬಿನ್ ಚನ್ನಪ್ಪ, 55 ವರ್ಷ,
ವಾಸಃ ಹುಣಸೇಘಟ್ಟ ಗ್ರಾಮ ಮತ್ತು ಅಂಚೆ,
ಕಸಬಾ ಹೋಬಳಿ, ತಿಪಟೂರು ತಾಲ್ಲೂಕು.

## ಆರೋಪಣೆ

ಶ್ರೀ ಮಹಮ್ಮದ್ಆರಿಫುಲ್ಲ.ಸಿ.ಎಫ್., ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ತಿಪಟೂರು ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ವಿರುದ್ಧ ಮಾಡುತ್ತಿರುವ ಆರೋಪಣಾ ಸಾರಾಂಶವೇನೆಂದರೆ:

ಮೇಲ್ಕಂಡ ಆರೋಪಿಯಾದ ನೀವು ಪಿರ್ಯಾದಿಯವರಿಂದ ರೂ.**1,00,000/-** ಗಳನ್ನು ದಿನಾಂಕಃ 25.06.2020 ರಂದು 1 ತಿಂಗಳ ಒಳಗಾಗಿ ಮರುಪಾವತಿಸುವುದಾಗಿ ತಿಳಿಸಿ ಸಾಲವಾಗಿ ಪಡೆದಿದ್ದು, ಸದರಿ ಸಾಲದ ತೀರುವಳಿ ಸಲುವಾಗಿ ತಿಪಟೂರು, ಹುಣಸೇಘಟ್ಟ ಶಾಖೆಯ, ಕಾವೇರಿ ಗ್ರಾಮೀಣ ಬ್ಯಾಂಕಿನ ದಿಃ **21.07.2020** ರ ಚೆಕ್ ನಂ.**788091** ನ್ನು ರೂ.**1,00,000/-** ಗಳಿಗೆ ಪಿರ್ಯಾದಿಯವರಿಗೆ ವಿತರಿಸಿದ್ದು, ನಂತರ ಪಿರ್ಯಾದಿಯವರು ಸದರಿ ಚೆಕ್ಕನ್ನು ತಿಪಟೂರು ಶಾಖೆಯ, ಕರ್ನಾಟಕ ಬ್ಯಾಂಕಿಗೆ ನಗದೀಕರಣಕ್ಕಾಗಿ ಸಲ್ಲಿಸಿದಾಗ ಸದರಿ ಬ್ಯಾಂಕಿನವರು ಚೆಕ್ ದಾರರ ಖಾತೆಯಲ್ಲಿ ಸಾಕಷ್ಟು ಹಣ ಲಭ್ಯವಿಲ್ಲ **(Funds insufficient)** ಎಂದು ತಿಳಿಸಿ ದಿಃ **05.08.2020** ರಂದು ಹಿಂಬರಹದೊಂದಿಗೆ ಸದರಿ ಚೆಕ್ಕನ್ನು ಪಿರ್ಯಾದಿಗೆ ಹಿಂದಿರುಗಿಸಿದ್ದು, ತದನಂತರ

ಪಿರ್ಯಾದುದಾರರು ಅವರ ವಕೀಲರ ಮೂಲಕ ದಿಃ **11.08.2020** ರಂದು ನೊಂದಾಯಿತ ಅಂಚೆ ಮೂಲಕ ಆರೋಪಿಯಾದ ನಿಮಗೆ ಹಣ ತಗಾದೆ ಮಾಡಿ ನೋಟೀಸ್ ಕಳುಹಿಸಿದ್ದು, ಸದರಿ ನೋಟೀಸ್ ನೊಂದಾಯಿತ ಅಂಚೆ ಮೂಲಕ ಕಳುಹಿಸಿದ ನೋಟೀಸ್ ದಿನಾಂಕಃ **02.09.2020** ರಂದು ಜಾರಿಯಾಗದೇ **Party 7 days absent** ಎಂಬ ಷರಾದೊಂದಿಗೆ ಹಿಂದೆ ಬಂದಿರುತ್ತದೆ, ಅದಾದ ನಂತರವೂ ಸಹ ಆರೋಪಿಯಾದ ನೀವು ಪಿರ್ಯಾದಿಗೆ ಸಾಲದ ಹಣವನ್ನು ಮರುಪಾವತಿಸಿರುವುದಿಲ್ಲ ಹಾಗೂ ಆರೋಪಿಯಾದ ನೀವು ಪಿರ್ಯಾದಿಗೆ ಮೋಸ ಮಾಡುವ ಉದ್ದೇಶದಿಂದ ಸದರಿ ಚೆಕ್ಕನ್ನು ಪಿರ್ಯಾದಿ ಪರವಾಗಿ ವಿತರಿಸಿದ್ದು, ಸದರಿ ನಿಮ್ಮ ಕೃತ್ಯವು ವ್ಯವಹರಣೀಯ ಲಿಖಿತಗಳ ಅಧಿ ನಿಯಮ ಕಲಂ. **138** ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವಾಗಿರುತ್ತದೆ ಎಂದು ನಿಮ್ಮ ಮೇಲೆ ಆರೋಪಿಸಲಾಗಿದೆ.

## ಆರೋಪಿಯ ಹೇಳಿಕೆ

ಪ್ರಶ್ನೆ:1) ಇದೀಗ ಓದಿ ಹೇಳಿದ ಆರೋಪಣಾ ಸಾರಾಂಶವು ನಿಮಗೆ ಅರ್ಥವಾಯಿತೇ?
ಉತ್ತರ:-

ಪ್ರಶ್ನೆ:2) ನೀವು ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?
ಉತ್ತರ:-

(ದಿನಾಂಕ: **16.11.2022** ರಂದು ತೆರೆದ ನ್ಯಾಯಾಲಯದಲ್ಲಿ ಮೇಲಿನ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿದ್ದು, ಮೇಲಿನ ಪ್ರಶ್ನೆಗಳಿಗೆ ಅವರು ನೀಡಿದ ಉತ್ತರಗಳನ್ನು ಪಡೆದು ಯಥಾವತ್ತಾಗಿ ನನ್ನಿಂದ ದಾಖಲು ಮಾಡಿಕೊಳ್ಳಲಾಯಿತು)

ಸಹಿ/-
(ಮಹಮ್ಮದ್ ಆರಿಪುಲ್ಲ.ಸಿ.ಎಫ್.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.,
ತಿಪಟೂರು